ಸರ್ಕಾರವು ಈ ಬಗ್ಗೆ ಅಧ್ಯಯನ ನಡೆಸಲು ಒಂದು ಸಮಿತಿಯನ್ನು ರಚಿಸಿದೆ. ಈ ಸಮಿತಿಯು, ವಿವಿಧ ಬಳಕೆಗಳಿಗಾಗಿ ಪಶ್ಚಿಮಾಭಿಮುಖವಾಗಿ ಹರಿಯುವ ನದಿಗಳಿಂದ ಲಭ್ಯವಿರುವ ನೀರನ್ನು ಉಪಯೋಗಿಸುವ ಬಗ್ಗೆ ಅಧ್ಯಯನವನ್ನು ನಡೆಸುತ್ತಿದೆ. ಈ ಸಮಿತಿಯ ವರದಿಯನ್ನು ಮಾರ್ಚ್ 2001ರಲ್ಲಿ ನಿರೀಕ್ಷಿಸಲಾಗಿದೆ.

ಕೆ.ಡಿ.ಪಿ. ಸಭೆಗಳಲ್ಲಿ ಪತ್ರಕರ್ತರು ಭಾಗವಹಿಸುವುದನ್ನು ನಿಷೇಧಿಸಿರುವುದು:

50 (280) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ): ಮಾನ್ಯ ಯೋಜನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ಕೆಡಿಪಿ ಸಭೆಗಳಲ್ಲಿ ಪತ್ರಕರ್ತರು ಭಾಗವಹಿಸುವುದನ್ನು ನಿಷೇಧಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು;

2) ಈ ರೀತಿಯ ನಿಷೇಧದಿಂದ ಸರ್ಕಾರ ಮಾಹಿತಿ ಹಕ್ಕನ್ನು ಕಸಿದು ಕೊಂಡಂತಾಗುವುದಿಲ್ಲವೆ;

3) ಪತ್ರಕರ್ತರಿಗೆ ಕೆಡಿಪಿ ಸಭೆಗಳಲ್ಲಿ ಭಾಗವಹಿಸಲು ಅವಕಾಶ ಮಾಡಿಕೊಟ್ಟು ಪಾರದರ್ಶಕ ಆಡಳಿತಕ್ಕೆ ಅವಕಾಶ ಕಲ್ಪಿಸಿಕೊಡಲಾಗುವುದೆ?

ಶ್ರೀಮತಿ ಸುಮಾ ವಸಂತ್ (ಯೋಜನಾ ರಾಜ್ಯ ಸಚಿವರು)

1) ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮವನ್ನು (20 ಅಂಶ ಕಾರ್ಯಕ್ರಮವೂ ಸೇರಿದಂತೆ) ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟಗಳಲ್ಲಿ ರಚಿಸಿರುವ ತ್ರೈಮಾಸಿಕ ಮತ್ತು ಮಾಸಿಕ ಪರಿಶೀಲನಾ ಸಮಿತಿಗಳಲ್ಲಿ ಪತ್ರಿಕಾ ಪ್ರತಿನಿಧಿಗಳು ಸದಸ್ಯರುಗಳಾಗಿರುವುದಿಲ್ಲ ಹಾಗೂ ಈ ಸಮಿತಿಗಳು ನಡೆಸುವ ಸಭೆಗಳಿಗೆ ಪತ್ರಿಕಾ ಪ್ರತಿನಿಧಿಗಳನ್ನು ಆಹ್ವಾನಿಸಲು ಅವಕಾಶ ಇರುವುದಿಲ್ಲ. ಆದಾಗ್ಯೂ ಒಂದು ವೇಳೆ ಈ ಸಮಿತಿಗಳ ಸಭೆಯನ್ನು ನಡೆಸಿದ ಅಧ್ಯಕ್ಷರುಗಳು ಇಚ್ಛಿಸಿದ್ದಲ್ಲಿ ಈ ಸಮಿತಿಯ ಸಭೆಗಳು ನಡೆದ ನಂತರ ಪ್ರತ್ಯೇಕವಾಗಿ ಪತ್ರಿಕಾ ಪ್ರತಿನಿಧಿಗಳನ್ನು ಆಹ್ವಾನಿಸಿ ಸಭೆಯ ಮುಖ್ಯಾಂಶಗಳ ಬಗ್ಗೆ ಮಾಹಿತಿಗಳನ್ನು ನೀಡಬಹುದೆಂದು ಸರ್ಕಾರವು ಸುತ್ತೋಲೆಯ ಮೂಲಕ ಸ್ಪಷ್ಟೀಕರಿಸಿದೆ.

2) --ಅದೇ--

3) ಸರ್ಕಾರವು ಈ ಪ್ರಸ್ತಾಪವನ್ನು ಪರಿಶೀಲಿಸುತ್ತದೆ.

ರಾಜ್ಯದಲ್ಲಿರುವ ಕೈಗಾರಿಕಾ ಪ್ರದೇಗಳು:

51 (191) ಶ್ರೀ ಹೊನ್ನಳ್ಳಿ ಜಬ್ಬಾರ್‌ಖಾನ್ ಹೈಯತ್‌ಖಾನ್: ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ರಾಜ್ಯದಲ್ಲಿ ಕೈಗಾರಿಕೆಗಳು ಇಲ್ಲದ ಪ್ರದೇಶಗಳು ಯಾವುವು; ಜಿಲ್ಲಾವಾರು ಮಾಹಿತಿ ನೀಡುವುದು;